ದಿಃ 11-02-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

**ಮುಖ್ಯ ವಿಚಾರಣೆಃ** ವಾದಿ ಪರವಾಗಿ ಶ್ರೀ ಎ ಎಫ್ ಕೆ ವಕೀಲರಿಂದ.

ಈ ದಾವೆಯಲ್ಲಿ ನಾನು 2 ನೇ ವಾದಿಯಾಗಿದ್ದು ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೆನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಇಂದು ನಾನು ಮಾನ್ಯ ನ್ಯಾಯಲಯಕ್ಕೆ ಸರ್ವೇ ನಂಬರ 19/2 ರ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು, ಸರ್ವೇ ನಂಬರ 19/2 ರ ನಕ್ಷೆಯ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 2 ಎಂದು, ಎಮ್ ಆರ್ ನಂಬರ ಟಿ12/2019-2020 ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ 3 ಎಂದು ಗುರುತಿಸಲಾಯಿತು. ಆದ್ದರಿಂದ ನನ್ನ ದಾವೆಯನ್ನು ಡಿಕ್ರಿ ಮಾಡಲು ಕೋರುತ್ತೇನೆ.

**ಪಾಟೀ ಸವಾಲುಃ** ಪ್ರತಿವಾದಿಗಳು ಹಾಗೂ ಅವರ ಪರ ವಕೀಲರು ಗೈರು ಹಾಜರಿದ್ದು ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೆ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾದಂ., ಹಳಿಯಾಳ.